ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/06/ಇಎಸ್‌ಟಿ(5)/2018/1548

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿನಾಂಕ: 24.08.2018

**ಸುತ್ತೋಲೆ**

**ವಿಷಯ :** ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ: 2368/2011 – ಶ್ರೀ ಬಿ.ಕೆ. ಪವಿತ್ರ ಪ್ರಕರಣದಂತೆ ಹಿಂಬಡ್ತಿ / ಮುಂಬಡ್ತಿ ಹೊಂದಿರುವವರ ವೇತನ ಪಾವತಿ ಕುರಿತು.

**ಉಲ್ಲೇಖ:**
1. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ: 2368/2011 – ಶ್ರೀ ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದ ದಿನಾಂಕ: 09.02.2017 ರ ಆದೇಶ.
2. ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 182 ಎಸ್‌ಆರ್‌ಆರ್ 2011, ದಿನಾಂಕ: 06.05.2017.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/639/ಸೆನೆನಿ/2017, ದಿ: 04.04.2018
4. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/ಸೆನೆನಿ/2018 (ಡಿಪಿಎಆರ್/277/ಎಸ್‌ಆರ್‌ಆರ್/2018), ದಿನಾಂಕ: 08.06.2018.
5. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/277/ಸೇನೆನಿ/2018, ದಿ: 06.08.2018
6. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/277/ಸೇನೆನಿ/2018, ದಿ: 18.08.2018

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, **ಉಲ್ಲೇಖ(1) ರ** ಮಾನ್ಯ ಸರ್ವೋಚ್ಚ ನ್ಯಾಯಾಲಯದ **ಸಿವಿಲ್ ಅಪೀಲು ಸಂಖ್ಯೆ: 2368/2011 –** ಶ್ರೀ ಬಿ.ಕೆ. ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ದಿನಾಂಕ: 09.02.2017 ರಂದು ನೀಡಿರುವ ತೀರ್ಪಿನಂತೆ, **ಉಲ್ಲೇಖ(2) ರ ಸರ್ಕಾರದ ದಿನಾಂಕ: 06.05.2017** ರ ಆದೇಶದಲ್ಲಿನ ಮಾರ್ಗಸೂಚಿಯಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಮುಂಬಡ್ತಿ ವೃಂದಗಳ ಜ್ಯೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಲಾಗಿದೆ. **ಉಲ್ಲೇಖ(3) ರ ಸರ್ಕಾರದ ಸುತ್ತೋಲೆಯಂತೆ** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಪರಿಷ್ಕರಿಸಲಾದ ಜೇಷ್ಠತಾ ಪಟ್ಟಿಯನ್ವಯ ಹಿಂಬಡ್ತಿ / ಮುಂಬಡ್ತಿ ಆದೇಶಗಳನ್ನು ಹೊರಡಿಸಲಾಗಿದೆ.

**ಉಲ್ಲೇಖ(4) ರ ಸರ್ಕಾರದ ಸುತ್ತೋಲೆಯಲ್ಲಿ** ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಪರಿಷ್ಕೃತ ಜ್ಯೇಷ್ಠತಾ ಪಟ್ಟಿಗಳನ್ವಯ ಅರ್ಹತಾ ದಿನಾಂಕಕ್ಕೆ ಅನುಗುಣವಾಗಿ ನಿಗದಿ / ಪುನರ್ ನಿಗದಿಪಡಿಸಬಹುದಾದ ವೇತನ / ನಿವೃತ್ತಿ ವೇತನಗಳ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

**ಉಲ್ಲೇಖ(5) ರ ಸರ್ಕಾರದ ಸುತ್ತೋಲೆಯಲ್ಲಿ** ಮಾನ್ಯ ಸರ್ವೋಚ್ಚ ನ್ಯಾಯಾಲಯವು ಶ್ರೀ ಬಿ.ಕೆ. ಪವಿತ್ರ ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಪರಿಷ್ಕರಿಸಲ್ಪಟ್ಟ ಜೇಷ್ಠತಾ ಪಟ್ಟಿಯನ್ವಯ ಮುಂಬಡ್ತಿ / ಹಿಂಬಡ್ತಿ ಪಡೆದು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹುದ್ದೆಯ ವೇತನವನ್ನು ಕೂಡಲೇ ಪಾವತಿ ಮಾಡಲು ಸೂಚಿಸಲಾಗಿತ್ತು.

...2/-

**ಉಲ್ಲೇಖ(6) ರ ಸರ್ಕಾರದ ಸುತ್ತೋಲೆಯಲ್ಲಿ** ಮಾನ್ಯ ಅಡ್ವೋಕೇಟ್ ಜನರಲ್, ಕರ್ನಾಟಕ ಇವರು ನೀಡಿರುವ ಸಲಹೆ ಹಾಗೂ ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯನ್ವಯ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ: 2368/2011 ಕ್ಕೆ ಸಂಬಂಧಿಸಿದಂತೆ ದಿನಾಂಕ: 9.2.2017 ರಂದು ನೀಡಿರುವ ತೀರ್ಪಿನನ್ವಯ ಹಿಂಬಡ್ತಿಗೊಳಗಾದ ಅಧಿಕಾರಿ / ನೌಕರರು ಹಿಂಬಡ್ತಿಗೊಳ್ಳುವುದಕ್ಕೆ ಮೊದಲು ಕರ್ತವ್ಯ ನಿರ್ವಹಿಸುತ್ತಿದ್ದ ಹುದ್ದೆಯ ವೇತನವನ್ನು, ಮಾನ್ಯ ಸರ್ವೋಚ್ಚ ನ್ಯಾಯಾಲಯ ನೀಡುವ ಅಂತಿಮ ಆದೇಶವನ್ನು ಪಾಲಿಸತಕ್ಕದೆಂಬ undertaking ಅನ್ನು, ಸಂಬಂಧಿಸಿದ ಅಧಿಕಾರಿ / ನೌಕರರಿಂದ ಪಡೆದು, ಅಡ್-ಹಾಕ್ ವೇತನವಾಗಿ ಪಾವತಿಸುವಂತೆ ಸಂಬಂಧಿಸಿದ ಎಲ್ಲಾ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿ (ಡಿಡಿಓ)ಗಳಿಗೆ ಸೂಚಿಸಿದೆ. ಅಡ್-ಹಾಕ್ ವೇತನವನ್ನು ಹೆಚ್.ಆರ್.ಎಂ.ಎಸ್ ಮುಖಾಂತರ ಪಾವತಿಸಲು ಸಾಧ್ಯವಾಗದಿದ್ದ ಸಂದರ್ಭಗಳಲ್ಲಿ ಭೌತಿಕವಾಗಿ (manually) ವೇತನದ ಬಿಲ್ಲನ್ನು ಸಿದ್ಧಪಡಿಸಿ ಪಾವತಿಸಲು ಕ್ರಮಕೈಗೊಳ್ಳುವಂತೆಯೂ ಸಹ ಸೂಚಿಸಿದೆ.

**ಮೇಲ್ಕಂಡ ಸರ್ಕಾರದ ಆದೇಶಗಳನ್ವಯ,** ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ: 2368/2011 – ಶ್ರೀ ಬಿ.ಕೆ. ಪವಿತ್ರ ಪ್ರಕರಣದಂತೆ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಹಿಂಬಡ್ತಿ / ಮುಂಬಡ್ತಿ ಹೊಂದಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿಗಳಿಗೆ ವೇತನ ಭತ್ಯೆಗಳನ್ನು ಪಾವತಿಸಲು ನಿಯಮಾನುಸಾರ ಸೂಕ್ತ ಕ್ರಮವಹಿಸಲು ಸಂಬಂಧಪಟ್ಟ ಎಲ್ಲಾ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

**ನಿರ್ದೇಶಕರು,**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು.**

ಇವರಿಗೆ:-

ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ **(ಮೂರು ಪ್ರತಿಗಳಲ್ಲಿ undertaking ಪಡೆದು, ಒಂದು ಪ್ರತಿ ಸೇವಾಪುಸ್ತಕದಲ್ಲಿ ಅಂಟಿಸಿ, ಒಂದು ಪ್ರತಿ ಮಹಾಲೇಖಪಾಲರಿಗೆ ಹಾಗೂ ಇನ್ನೊಂದು ಪ್ರತಿಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸಲು ಸೂಚಿಸಿದೆ)**

**ಪ್ರತಿ:-**

1. ಮಹಾಲೇಖಪಾಲರು (ಎ&ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2), ಕರ್ನಾಟಕ, ಬೆಂಗಳೂರು;
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು;
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ), ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು;
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು;
5. ಜಂಟಿ ನಿರ್ದೇಶಕರು (ಆಡಳಿತ) / ಆಡಳಿತಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು;
6. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು;
7. ಕಛೇರಿ ಪ್ರತಿ.